# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನಡವಳಿಗಳು

ವಿಷಯ: 2018ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗಧೀಕರಣ ಪಡೆಯುವ ಸೌಲಭ್ಯವನ್ನು ನಿಯತಗೊಳಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 04 ಸೇನಿಸೇ 2017, ದಿನಾಂಕ: 20-11-2017.
2) ಮುಖ್ಯ ಲೆಕ್ಕಾಧಿಕಾರಿಗಳ ವರದಿ ದಿನಾಂಕ: 25-04-2018.
3) ಈ ಕಛೇರಿ ಸಮಸಂಖ್ಯೆಯ ಟಿಪ್ಪಣಿ ದಿನಾಂಕ: 30-05-2018.
4) ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸ್ಥಾಯಿ ಸಮಿತಿಯು ವಿಷಯ ಸಂಖ್ಯೆ: ತೆಆಸ್ಥಾಸ/02/2018-19ರಲ್ಲಿ ದಿ: 18-06-2018 ರಂದು ತೆಗೆದುಕೊಂಡಿರುವ ನಿರ್ಣಯ

* * * * *

**ಪ್ರಸ್ತಾವನೆ:**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಆರ್ಥಿಕ ಇಲಾಖೆಯು ಉಲ್ಲೇಖ-(1)ರ ಆದೇಶದಲ್ಲಿ 2018ನೇ ಸಾಲಿನ ಅವಧಿಗೆ ಗರಿಷ್ಠ 15 ದಿನಗಳಿಗೆ ಮೀರದ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜಾ ವೇತನಕ್ಕೆ ಸಮನಾದ ನಗಧೀಕರಣ ಸೌಲಭ್ಯ ಪಡೆಯುವ ಯೋಜನೆಯನ್ನು ದಿನಾಂಕ: 01-01-2018 ರಿಂದ ಜಾರಿಗೊಳಿಸಿ ಈ ಕೆಳಕಂಡಂತೆ ನಿಯತಗೊಳಿಸಲಾಗಿರುತ್ತದೆ.

| ಕ್ರ.ಸಂ. | ಅಧಿಕಾರಿ / ನೌಕರರ ಸಮೂಹ | ಮುಂಚಿತವಾಗಿ ಒಂದು ತಿಂಗಳ ನೋಟಿಸ್ ನೀಡಿ 2017ನೇ ಸಾಲಿನ ಅವಧಿಗೆ ನಗದೀಕರಣ ಸೌಲಭ್ಯ ಪಡೆಯುವ ಅವಧಿ |
|---|---|---|
| 1. | ಗ್ರೂಪ್ 'ಡಿ' ಸಮೂಹ | ಅವರ ಇಚ್ಛೆಯಂತೆ 2018ರ ಕ್ಯಾಲೆಂಡರ್ ವರ್ಷದ ಯಾವುದೇ ತಿಂಗಳಿನಲ್ಲಿ |
| 2. | ಉಳಿದ ಸಮೂಹ (ಎ, ಬಿ, ಸಿ) | ಅವರ ಇಚ್ಛೆಯಂತೆ ಏಪ್ರಿಲ್ 2018 ರಿಂದ ಡಿಸೆಂಬರ್ 2018ರ ವರೆಗಿನ ಯಾವುದೇ ತಿಂಗಳಿನಲ್ಲಿ |

ಸದರಿ ಸರ್ಕಾರದ ಉಲ್ಲೇಖ-(1)ರ ಆದೇಶವನ್ನು ಪಾಲಿಕೆಯಲ್ಲಿ ಅಳವಡಿಸಿಕೊಳ್ಳುವ ಸಂಬಂಧ ಮುಖ್ಯ ಲೆಕ್ಕಾಧಿಕಾರಿಗಳ ಅಭಿಪ್ರಾಯ ವರದಿಯನ್ನು ಕೋರಲಾಗಿ, ಮುಖ್ಯ ಲೆಕ್ಕಾಧಿಕಾರಿಗಳು ಉಲ್ಲೇಖ-(2)ರಲ್ಲಿ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 118 ರಂತೆ ಹಾಗೂ ಸದರಿ ಆದೇಶವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ / ಎರವಲು ಸೇವೆಯ ನೌಕರರಿಗೆ ಸದರಿ ಗಳಿಕೆ ರಜೆಯ ಪ್ರಯೋಜನ ನೀಡಲು 2018-19ನೇ ಸಾಲಿಗೆ ರೂ. 15.50 ಕೋಟಿಗಳ ಅನುದಾನ ಅಂದಾಜಿಸಿ 2018-19ನೇ ಸಾಲಿನ ಆಯವ್ಯಯದಲ್ಲಿ ಅವಕಾಶ ಕಲ್ಪಿಸಿಕೊಡಲಾಗಿರುತ್ತದೆ. ಆದ್ದರಿಂದ 2018ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗಧೀಕರಣ ಪಡೆಯುವ ಸೌಲಭ್ಯವನ್ನು ಸರ್ಕಾರದ ಆದೇಶ ಸಂಖ್ಯೆ: ಆಇ 04 ಸೇನಿಸೇ 2017, ದಿನಾಂಕ: 20-11-2017 ರಂತೆ ಪಾಲಿಕೆಯಲ್ಲಿ ಅಳವಸಿಕೊಳ್ಳಬಹುದಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಆದುದರಿಂದ ಉಲ್ಲೇಖ-(1)ರ ಸರ್ಕಾರದ ಆರ್ಥಿಕ ಇಲಾಖೆಯ ಆದೇಶವನ್ನು ನಗರ ಪಾಲಿಕೆಯಲ್ಲಿ ಅಳವಡಿಸಿಕೊಳ್ಳುವ ಸಂಬಂಧ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ

ತೀರ್ಮಾನಕ್ಕಾಗಿ ಉಲ್ಲೇಖ-(3)ರ ರೀತ್ಯಾ ಟಿಪ್ಪಣಿಯನ್ನು ಮಂಡಿಸಲಾಗಿದ್ದು, ಸದರಿ ಟಿಪ್ಪಣಿಗೆ ಸಂಬಂಧಿಸಿದಂತೆ, ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯು ಉಲ್ಲೇಖ-(4)ರಲ್ಲಿ "ದಿ: 30-05-2018ರ ಆಯುಕ್ತರ ಟಿಪ್ಪಣಿಯನ್ನು ಒಪ್ಪಿರುತ್ತದೆ"

ಆದ್ದರಿಂದ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**-: ಆದೇಶ :-**

ಸಂಖ್ಯೆ: ಬಿ12(5ಜಿ)ಪಿಆರ್/206/2009-10 / 2017-18 ದಿನಾಂಕ: 19/6/18

ಪ್ರಸ್ತಾವನೆಯಲ್ಲಿ ತಿಳಿಸಿರುವ ಅಂಶಗಳ ಹಿನ್ನೆಲೆಯಲ್ಲಿ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯು ಉಲ್ಲೇಖ-(4)ರಲ್ಲಿ ದಿನಾಂಕ: 30-05-2018ರ ಆಯುಕ್ತರ ಟಿಪ್ಪಣಿಯನ್ನು ಒಪ್ಪಿರುವುದರಿಂದ ಸರ್ಕಾರದ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 04 ಸೇನಿಸೇ 2017, ದಿನಾಂಕ: 20-11-2017ನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅಳವಡಿಸಿಕೊಳ್ಳಲಾಗಿದೆ. ಇದರಂತೆ, ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಸೂಕ್ತಕ್ರಮ ಕೈಗೊಳ್ಳಲು ಸೂಚಿಸಿದೆ.

ಮಾನ್ಯ ಆಯುಕ್ತರವರ ಆದೇಶದಂತೆ}

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತಶಾಖೆಗೆ ರವರಿಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತಶಾಖೆಗೆ ರವರಿಗೆ ಕಳುಹಿಸಿದೆ.
: ಆಯುಕ್ತರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ/ಹಣಕಾಸು/ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಕೌನ್ಸಿಲ್ ಕಾರ್ಯದರ್ಶಿ ರವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರಿಗೆ ಹಾಗೂ ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.
: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸಿದೆ.
: ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.
: ಮು.ಲೆ.ಅ/ಮು.ಲೆ.ಪ/ಎಲ್ಲಾ ವಲಯ ಸ.ನಿ (ಹಣಕಾಸು) ರವರಿಗೆ ಕಳುಹಿಸಿದೆ.
: ಕಛೇರಿ ಪ್ರತಿ.